22

# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕಾರ್ಮಿಕರು

ಪತ್ರಿಕೆಯ ಹೆಸರು ; NAME OF THE NEWS PAPER: ಉದಯವಾಣಿ    ದಿನಾಂಕ : DATE : 12/6/2020

### ಕೆಲಸದ ಅವಧಿ ಹೆಚ್ಚಳ: ಹೈ ಎಚ್ಚರಿಕೆ

ಉವಾ : 12-6-20

ಬೆಂಗಳೂರು: ಕೊರೊನಾ ಪರಿಸ್ಥಿತಿಯನ್ನು 'ಸಾರ್ವಜನಿಕ ತುರ್ತು ಪರಿಸ್ಥಿತಿ'' ಎಂದು ಪರಿಗಣಿಸಿ ಕೈಗಾರಿಕೆಗಳ ಕಾಯ್ದೆಯ ಸೆಕ್ಷನ್ 5ರನ್ವಯ ಕಾರ್ಮಿಕರ ಕೆಲಸದ ಅವಧಿ ಹೆಚ್ಚಿಸಿರುವುದನ್ನು ಒಪ್ಪಲು ಸಾಧ್ಯವಿಲ್ಲ ಎಂದಿರುವ ಹೈಕೋರ್ಟ್, ಹೊಸ ನಿರ್ಧಾರ ಕೈಗೊಳ್ಳದಿದ್ದರೆ ತಡೆಯಾಜ್ಞೆ ಜಾರಿ ಮಾಡುವ ಎಚ್ಚರಿಕೆ ನೀಡಿದೆ.

ಕೈಗಾರಿಕೆಗಳಲ್ಲಿ ಕಾರ್ಮಿಕರ ಕೆಲಸದ ಅವಧಿ 9ರಿಂದ 10 ತಾಸುಗಳಿಗೆ ಹೆಚ್ಚಿಸಿ ಸರ್ಕಾರ ಹೊರಡಿಸಿರುವ ಅಧಿಸೂಚನೆ ರದ್ದುಗೊಳಿಸಲು ಬೆಂಗಳೂರಿನ ದೀಪಾಂಜಲಿ ನಗರದ ನಿವಾಸಿ ಎಚ್. ಮಾರುತಿ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಮುಖ್ಯ ನ್ಯಾ. ಎ.ಎಸ್. ಓಕಾ ಹಾಗೂ ನ್ಯಾ. ಇ.ಎಸ್.ಇಂದಿರೇಶ್ ಅವರಿದ್ದ ವಿಭಾಗೀಯ ಪೀಠ ವಿಚಾರಣೆ ನಡೆಸಿತು. ಶುಕ್ರವಾರ ದೊಳಗೆ ಸರ್ಕಾರ ಹೊಸದಾಗಿ ತೀರ್ಮಾನ ತೆಗೆದುಕೊಳ್ಳದಿದ್ದರೆ ಅಧಿಸೂಚನೆಗೆ ತಡೆಯಾಜ್ಞೆ ನೀಡಲಾಗುವುದು ಎಂದು ಎಚ್ಚರಿಸಿತು.